ಶ್ರೀ ಹೆಚ್. ಆಂಜನೇಯ (ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು)

ಅ) ಹೌದು.

ಆ) ಸರ್ಕಾರದ ಸುತ್ತೋಲೆ ಸಂಖ್ಯೆ: ಸಕಇ 87 ಸಮನ್ವಯ 2013, ದಿನಾಂಕ:20–7–2013 ರನ್ವಯ ವಿದ್ಯಾರ್ಥಿ ನಿಲಯಗಳಿಗೆ ಪ್ರವೇಶ ಕೋರಿ ಅರ್ಜಿ ಸಲ್ಲಿಸುವ ಎಲ್ಲಾ ಅರ್ಹ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಪ್ರವೇಶ ನೀಡಬೇಕಾಗಿರುವುದರಿಂದ, ಸಂಖ್ಯಾಬಲ ಹೆಚ್ಚಿಸುವ ಪ್ರಮೇಯವಿರುವುದಿಲ್ಲ.

ತಂಪು ಪಾನೀಯ/ಕುಡಿಯುವ ನೀರಿನ ಬಾಟಲ್‌ಗಳನ್ನು ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿರುವುದು

5160 (5671); ಶ್ರೀ ಮೇಟಿ ಹುಲ್ಲಪ್ಪ ಯಮನಪ್ಪ (ಬಾಗಲಕೋಟೆ)

1. ರಾಜ್ಯದಲ್ಲಿ ತಂಪು ಪಾನೀಯ ಮತ್ತು ಪ್ಯಾಕೇಜ್ ಕುಡಿಯುವ ನೀರಿನ ಬಾಟಲ್‌ಗಳನ್ನು ಎಮ್.ಆರ್.ಪಿ ದರಕ್ಕಿಂತ ಹೆಚ್ಚಿನ ಬೆಲೆಗೆ ಹೋಟೆಲ್ ಮತ್ತು ಉಪಹಾರ ಮಂದಿರಗಳಲ್ಲಿ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;
2. ಹಾಗಿದ್ದಲ್ಲಿ, ಅಂತಹ ವ್ಯಾಪಾರಸ್ಥರ ಮೇಲೆ ಏನು ಕ್ರಮ ಕೈಗೊಳ್ಳಲಾಗಿದೆ; ಸರ್ಕಾರದ ಗಮನಕ್ಕೆ ಬಂದಿರುವ ಪ್ರಕರಣಗಳೆಷ್ಟು;
3. ಬೆಳಕಿಗೆ ಬಂದಿರುವ ಪ್ರಕರಣಗಳೆಷ್ಟು;
4. ಇಲ್ಲದಿದ್ದಲ್ಲಿ, ಸಂಬಂಧಪಟ್ಟ ಅಧಿಕಾರಿಗಳ ಮೇಲೆ ಕೈಗೊಂಡಿರುವ ಕ್ರಮವೇನು; (ವಿವರ ನೀಡುವುದು)?

ಶ್ರೀ ದಿನೇಶ ಗುಂಡೂರಾವ್ (ಮಾನ್ಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು)

1. ಹೌದು

2. ರಾಜ್ಯದಲ್ಲಿ ತಂಪು ಪಾನೀಯ ಮತ್ತು ಪ್ಯಾಕೇಜ್ ಕುಡಿಯುವ ನೀರಿನ ಬಾಟಲ್‌ಗಳನ್ನು ಎಂ.ಆರ್.ಪಿ. ದರಕ್ಕಿಂತ ಹೆಚ್ಚಿನ ಬೆಲೆಗೆ ಹೋಟೆಲ್ ಮತ್ತು ಉಪಹಾರ ಮಂದಿರಗಳಲ್ಲಿ ಮಾರಾಟ ಮಾಡುತ್ತಿರುವುದನ್ನು ಪತ್ತೆ ಹಚ್ಚಲು ನಿಯಮಾನುಸಾರ ತಪಾಸಣೆಗಳನ್ನು ಕೈಗೊಳ್ಳಲಾಗುತ್ತಿದೆ. ತಪ್ಪಿತಸ್ಥ ವ್ಯಾಪರಸ್ಥರುಗಳ ವಿರುದ್ಧ ದಿ ಲೀಗಲ್ ಮೆಟ್ರಾಲಜಿ (ಪೊಟ್ಟಣ ಸಾಮಗ್ರಿ) ನಿಯಮಗಳು 2011 ನಿಯಮ 18(2)ರ ಉಲ್ಲಂಘನೆಗಾಗಿ ಪ್ರಕರಣಗಳನ್ನು ಈ ಕೆಳಕಂಡಂತೆ ದಾಖಲಿಸಲಾಗಿರುತ್ತದೆ.

2014–15ರಲ್ಲಿ – 332 ಪ್ರಕರಣಗಳು

2015–16ರಲ್ಲಿ – 94 ಪ್ರಕರಣಗಳು.

3. 2014–15ರಲ್ಲಿ – 332 ಪ್ರಕರಣಗಳು

2015–16ರಲ್ಲಿ – 94 ಪ್ರಕರಣಗಳು.

4. ಅನ್ವಯಿಸುವುದಿಲ್ಲ.

ಹಿಂದುಳಿದ ವರ್ಗಗಳ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳು

5161 (4954); ಶ್ರೀ ಮೋಹಿಯುದ್ದಿನ್ ಬಾವಾ ಬಿ.ಎ. (ಮಂಗಳೂರು ನಗರ ಉತ್ತರ)

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಮೆಟ್ರಿಕ್–ಪೂರ್ವ ವಿದ್ಯಾರ್ಥಿನಿಲಯಗಳು ಎಷ್ಟು; (ಮಾಹಿತಿ ನೀಡುವುದು);

ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಮೆಟ್ರಿಕ್–ಪೂರ್ವ ವಿದ್ಯಾರ್ಥಿನಿಲಯಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)?